ಚಿಕ್ಕಮಗಳೂರು ಜಿಲ್ಲಾ ಪರಿಷತ್ ಮೂಲಕ ಹೊಸದಾಗಿ ನೌಕರರನ್ನು ನೇಮಕ.

946. ಶ್ರೀಮತಿ ಮೋಟಮ್ಮ (ಮೂಡಿಗೆರೆ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಚಿಕ್ಕಮಗಳೂರು ಜಿಲ್ಲಾ ಪರಿಷತ್ ಪ್ರಾರಂಭವಾದಲ್ಲಿಂದ ಎಷ್ಟು ಜನರಿಗೆ ಹೊಸದಾಗಿ ನೌಕರಿಗೆ ನೇಮಕ ಮಾಡಲಾಗಿದೆ ;

ಆ) ಇದಕ್ಕೆ ಸರ್ಕಾರವು ಅನುಮತಿ ನೀಡಲಾಗಿತ್ತೆ ;

ಇ) ಜಿಲ್ಲಾ ಪರಿಷತ್ತಿಗೆ ಹೊಸದಾಗಿ ನೌಕರರನ್ನು ನೇಮಕ ಮಾಡುವಾಗ ಮೀಸಲಾತಿ ಪದ್ಧತಿಯನ್ನು ಅನುಸರಿಸಲಾಗಿದೆಯೇ? ಹಾಗಿದ್ದಲ್ಲಿ ಪೂರ್ಣ ಪಟ್ಟಿಯನ್ನು ಒದಗಿಸುವುದು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) –

ಅ) ಚಿಕ್ಕಮಗಳೂರು ಜಿಲ್ಲಾ ಪರಿಷತ್ತಿನಲ್ಲಿ 10 ಜನರನ್ನು ದಿನಗೂಲಿ ಆಧಾರದ ಮೇಲೆ ನೇಮಕ ಮಾಡಲಾಗಿದೆ.

ಆ) ಸರ್ಕಾರವು ಸುತ್ತೋಲೆ ಸಂಖ್ಯೆ :ಆರ್.ಡಿ.ಪಿ. 198 ಜಡ್.ಪಿ.ಜಡ್. 87, ದಿನಾಂಕ 9.7.1987 ರಲ್ಲಿ ಜಿಲ್ಲಾ ಪರಿಷತ್ತಿಗೆ ತಾತ್ಕಾಲಿಕವಾಗಿ ಬೆರಳಚ್ಚುಗಾರರು ಹಾಗೂ ಶೀಘ್ರಲಿಪಿಗಾರರನ್ನು 120 ದಿನಗಳಿಗೆ ಮಾತ್ರ ಮಂಜೂರಾದ ಹುದ್ದೆಗಳ ಶೇಕಡ 50ಕ್ಕೆ ಮೀರದಂತೆ ಉದ್ಯೋಗ ಮತ್ತು ವಿನಿಮಯ ಕೇಂದ್ರದಿಂದ ಹೆಸರುಗಳನ್ನು ಪಡೆದು ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರು ಹೊರಡಿಸಿರುವ ಸೂಚನೆಗಳನ್ನು ಅನುಸರಿಸಿ ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿತ್ತು. ವಾಹನ ಚಾಲಕರ ಹುದ್ದೆಗೆ ಸಂಬಂಧಿಸಿದಂತೆ ಉದ್ಯೋಗ ವಿನಿಮಯ ಕೇಂದ್ರದಿಂದ ಹೆಸರುಗಳನ್ನು ಪಡೆದು ಜಿಲ್ಲಾ ಪರಿಷತ್ತುಗಳೇ ರೋಸ್ಟರ್ ಪದ್ಧತಿಯನ್ನು ಅನುಸರಿಸಿ ಖಾಯಂ ನೇಮಕಾತಿ ಮಾಡಬಹುದಾಗಿದೆ.

ಇ) ಜಿಲ್ಲಾ ಪರಿಷತ್ತು, ಚಿಕ್ಕಮಗಳೂರಿನಲ್ಲಿ ದಿನಗೂಲಿ ಆಧಾರದ ಮೇಲೆ ಈ ಕೆಳಗಿನಂತೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ;

5 ಶೀಘ್ರಲಿಪಿಗಾರರು
4 ಬೆರಳಚ್ಚುಗಾರರು
1 ವಾಹನ ಚಾಲಕ

ಈ ನೇಮಕಾತಿ ಮಾಡುವಾಗ ಮೀಸಲಾತಿ ಪದ್ಧತಿಯನ್ನು ಪಾಲಿಸಿರುವುದಿಲ್ಲ.

ಕುಂಟರಾಮನಹಳ್ಳಿ ಬಳಿ ಇರುವ ಗಂಡಿಕೆರೆಯ ಬಗ್ಗೆ

960. ಶ್ರೀ ಟಿ. ಬಿ. ಜಯಚಂದ್ರ (ಕಳ್ಳಂಬೆಳ್ಳ) :– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಗುಬ್ಬಿ ತಾಲ್ಲೂಕು ಕಂಟರಾಮನಹಳ್ಳಿಯ ಹತ್ತಿರ ಬರುವ ಗಂಡಿಕೆರೆಗೆ ಚಾನಲ್ ಇಲ್ಲದೆ ಇರುವುದು ಸರ್ಕಾರಕ್ಕೆ ತಿಳಿದಿದೆಯೇ ;

ಆ) ಈ ಅಚ್ಚುಕಟ್ಟು ಪ್ರದೇಶದ ಅಭಿವೃದ್ಧಿ ಬಗ್ಗೆ ಅನೇಕ ಮನವಿಗಳು ಶಾಸಕರಿಂದ ಬಂದಿದ್ದು ಮತ್ತು ವಿಧಾನಸಭೆಯಲ್ಲಿಯೂ ಸಹ ಪ್ರಸ್ತಾವನೆಯಾಗಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಹಾಗಿದ್ದಲ್ಲಿ ಕೆಲಸವನ್ನು ಕೈಗೆತ್ತಿಕೊಂಡಿರುವುದಿಲ್ಲವೆಂಬುದು ನಿಜವೆ;

ಈ) ಕೆಲಸವನ್ನು ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿಯೆಷ್ಟು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) :-

ಅ) ಹೌದು.

ಆ) ಬಂದಿದೆ.

ಇ) ಕಾಲುವೆಗಳ ಉಳಿದ ಕೆಲಸಗಳಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿಗಳನ್ನು ನೀಡಲಾಗಿದ್ದು ಕೆಲಸವನ್ನು ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು.

ಈ) ಅನುದಾನದ ಲಭ್ಯತೆಯನ್ನವಲಂಬಿಸಿ ಕೆಲಸವನ್ನು ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು.

ಹುಳಿಯಾರು ಮತ್ತು ಹಿರಿಯೂರು ರಸ್ತೆ ದುರಸ್ತಿ

956. ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) :- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ -

ಅ) ಹುಳಿಯೂರು ಮತ್ತು ಹಿರಿಯೂರು ರಸ್ತೆಯು ತುಂಬಾ ಹದಗೆಟ್ಟಿದ್ದು ಅದನ್ನು ಸರಿಪಡಿಸಲು ಸರ್ಕಾರವು ಕ್ರಮ ತೆಗೆದುಕೊಳ್ಳದೆ ಇರುವುದು ನಿಜವೆ;

ಆ) ಹಾಗಿದ್ದಲ್ಲಿ ರಸ್ತೆಯನ್ನು ದುರಸ್ತಿ ಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಜಿ.ಹೆಚ್. ಅಶ್ವತ್ಥ್ ರೆಡ್ಡಿ (ಲೋಕೋಪಯೋಗಿ ಸಚಿವರು) -

ಅ) ವಾಹನ ಸಂಚಾರಕ್ಕೆ ತೊಂದರೆ ಆಗದಂತೆ ಈ ರಸ್ತೆಯನ್ನು ನಿರ್ವಹಣೆ ಮಾಡಲಾಗಿದೆ.

ಆ) ಲಭ್ಯವಿರುವ ನಿರ್ವಹಣೆ ಅನುದಾನದಲ್ಲಿ ಈ ರಸ್ತೆಯನ್ನು ಆದಷ್ಟು ಮಟ್ಟಿಗೆ ಸುಸ್ಥಿತಿಯಲ್ಲಿಡಲಾಗುತ್ತಿದೆ. ರಸ್ತೆಯಲ್ಲಿದ್ದ ಗುಂಡಿಗಳನ್ನು ಮುಚ್ಚಲಾಗಿದೆ. ರಸ್ತೆಯ ಬದಿಗಳನ್ನು ಶಕ್ತಿಯುತವನ್ನಾಗಿ ಮಾಡಲು ಜಲ್ಲಿ ಸಂಗ್ರಹಣೆ ಕಾರ್ಯ ಪ್ರಗತಿಯಲ್ಲಿದೆ.

ಜಿಲ್ಲಾಪರಿಷತ್ತು ಮತ್ತು ಮಂಡಲ ಪಂಚಾಯಿತಿಗಳಿಗೆ ಅಧಿಕಾರಿಗಳನ್ನು ನೇಮಿಸುವ ಬಗ್ಗೆ

959. ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) :- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ -

ಅ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತಿಗಳ ಆಡಳಿತಾಧಿಕಾರಿಗಳ ವಶಕ್ಕೆ ಬಂದಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಆ) ಆಡಳಿತಾಧಿಕಾರಿಗಳ ನೇಮಕ ಪಂಚಾಯತಿ ಕಾರ್ಯ ವ್ಯವಸ್ಥೆಗೆ ವಿರುದ್ಧವಲ್ಲವೆ;

ಇ) ಹಾಗಿದ್ದಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತ್‌ಗಳಿಗೆ ಅಧಿಕಾರಿಗಳನ್ನು ನೇಮಕ ಮಾಡಲು ಸರ್ಕಾರವು ಆಲೋಚಿಸಿದೆಯೇ;

ಈ) ಹಾಗಿದ್ದಲ್ಲಿ ಎಂದಿನಿಂದ ನೇಮಕಾತಿ ಮಾಡಲಾಗುವುದು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು) -

ಅ) ಹೌದು.

ಆ) ಕಳೆದ ಐದು ವರ್ಷಗಳಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತಿಗಳ ಕಾರ್ಯ ನಿರ್ವಹಣೆ ಅವುಗಳ ಸಾಮರ್ಥ್ಯ ಹಾಗೂ ನ್ಯೂನತೆಗಳನ್ನು ಹೊರತಂದಿದೆ. ಹೀಗೆ ಗಮನಿಸಲಾದ ನ್ಯೂನತೆಗಳನ್ನು ಸರಿಪಡಿಸಲು ಮತ್ತು 72ನೇ ಸಂವಿಧಾನ ತಿದ್ದುಪಡಿಯ ವಿಧೇಯಕದ ಬೆಳೆಯಲ್ಲಿ ಸರ್ಕಾರವು ಈಗಿರುವ ಪಂಚಾಯತ್ ರಾಜ್ ಕಾಯಿದೆಗೆ ಒಂದು ಸಮಗ್ರ ತಿದ್ದುಪಡಿಯನ್ನು ತರಲು ಉದ್ದೇಶಿಸಿದೆ. ತಿದ್ದುಪಡಿಯ ಮಸೂದೆಯು ಜಾರಿಗೆ ಬಂದ ನಂತರ ಆದಷ್ಟು ಬೇಗನೆ ಚುನಾವಣೆ ನಡೆಸಲಾಗುವುದು. ಅಲ್ಲಿಯವರೆಗೆ ತಾತ್ಕಾಲಿಕವಾಗಿ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ.